1085 (1467) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ): ಮಾನ್ಯ ಕಂದಾಯ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆ ಗುಡಿಬಂಡೆ ತಾಲ್ಲೂಕು ಕಛೇರಿ ಕಟ್ಟಡವು ಪುರಾತನವಾಗಿದ್ದು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಗುಡಿಬಂಡೆ ಪಟ್ಟಣದಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

ಅ) ಹೌದು.

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಸಂಪನ್ಮೂಲ ವ್ಯವಸ್ಥೆಯಾಗುತ್ತಲೇ ಮಿನಿ ವಿಧಾನಸೌಧ ಕಾಮಗಾರಿ ಪ್ರಾರಂಭಿಸಲಾಗುವುದು.

1086 (1468) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಯಲು ಸೀಮೆ ಜಿಲ್ಲೆಗಳಲ್ಲಿ ಅರಣ್ಯ ಅಭಿವೃದ್ಧಿಪಡಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು;

ಶ್ರೀ ಸಿ. ಚನ್ನಿಗಪ್ಪ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) ಬಯಲು ಸೀಮೆ ಜಿಲ್ಲೆಗಳಲ್ಲಿ ಅರಣ್ಯ ಅಭಿವೃದ್ಧಿಪಡಿಸುವ ಕಾರ್ಯಕ್ರಮಗಳು ಪ್ರಗತಿಯಲ್ಲಿದೆ.

ಆ) 1. 2005–06ನೇ ಸಾಲಿನಲ್ಲಿ 4,834 ಹೆಕ್ಟೇರ್ ನೆಡುತೋಪುಗಳನ್ನು ಬೆಳೆಸಿದೆ ಹಾಗೂ 62.955 ಲಕ್ಷ ಸಸಿಗಳನ್ನು ಸಾರ್ವಜನಿಕರಿಗೆ, ರೈತರಿಗೆ, ಸಂಘಸಂಸ್ಥೆಗಳಿಗೆ ವಿತರಿಸಲಾಗಿದೆ.

2. 2006–07ನೇ ಸಾಲಿನಲ್ಲಿ 9391 ಹೆಕ್ಟೇರ್ ನೆಡುತೋಪು ಹಾಗೂ 63.260 ಲಕ್ಷ ಸಸಿಗಳನ್ನು ಸಾರ್ವಜನಿಕರಿಗೆ, ರೈತರಿಗೆ, ಸಂಘ ಸಂಸ್ಥೆಗಳಿಗೆ ವಿತರಿಸುವ ಗುರಿ ಹೊಂದಲಾಗಿದೆ. ಈ ಸಾಲಿನ ಮಳೆಗಾಲದಲ್ಲಿ ಈ ಗುರಿಗಳನ್ನು ಸಾಧಿಸಲಾಗುವುದು.

1087 (1624) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಲಸಂವರ್ಧನೆ ಯೋಜನೆಯಡಿ ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕುಗಳಲ್ಲಿ ಅಭಿವೃದ್ಧಿ ಪಡಿಸುತ್ತಿರುವ ಕೆರೆಗಳ ಸಂಖ್ಯೆ ಎಷ್ಟು;